**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 03 ಡಿವಿಪಿ (1) 2017/(1)

ನಿರ್ದೇಶಕರವರಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 560 001.
ದಿನಾಂಕ: 17-08-2017.

**ಅಧಿಕೃತ ಜ್ಞಾಪನ**

**ವಿಷಯ:** ರಾಷ್ಟ್ರೀಯ ಮಾನ್ಯತಾ ಮಂಡಳ, ನವದೆಹಲಿ ಇವರಿಂದ ಮಾನ್ಯತೆ ಪಡೆಯುವ ಸಲುವಾಗಿ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಮಾನ್ಯತಾ ಶುಲ್ಕವನ್ನು ಬಿಡುಗಡೆ ಮಾಡುವ ಬಗ್ಗೆ

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 17 ಹೆಚ್‌ಪಿಟಿ 2017, ದಿನಾಂಕ 13-04-2017, 10-07-2017
2. ಸರ್ಕಾರದ ಆದೇಶ ಸಂಖ್ಯೆ: ಇಡಿ 17 ಹೆಚ್‌ಪಿಟಿ 2017, ದಿನಾಂಕ 10-07-2017
3. ಈ ಕಛೇರಿ ಜ್ಞಾಪನ ಸಂಖ್ಯೆ: ಡಿಟಿಇ/ಎನ್‌ಬಿಎ/01/2017-18/30, ದಿನಾಂಕ 04-04-2017

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಆದೇಶದಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯಡಿ ಮುಂದುವರೆಯುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳ ಕಾರ್ಯಕ್ರಮಗಳನ್ನು 2017-18 ನೇ ಸಾಲಿಗೆ ಮುಂದುವರೆಸಿ, ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಅನುಮತಿಯನ್ನು ನೀಡಿ ಆದೇಶವನ್ನು ಹೊರಡಿಸಲಾಗಿದೆ. ಉಲ್ಲೇಖ (2) ರ ಸರ್ಕಾರದ ಆದೇಶದಲ್ಲಿ 2017-18 ನೇ ಸಾಲಿನ ಆಯವ್ಯಯದ ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಉಲ್ಲೇಖ (3) ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ರಾಷ್ಟ್ರೀಯ ಮಾನ್ಯತಾ ಮಂಡಳ (National Board of Accreditation), ನವದೆಹಲಿ ಇವರಿಂದ ಮಾನ್ಯತೆ ಪಡೆಯುವ ಸಲುವಾಗಿ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಈ ದಿಸೆಯಲ್ಲಿ 2017-18 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2203-00-001-0-01-051-ಸಾಮಾನ್ಯ ವೆಚ್ಚದಡಿ ಒಟ್ಟು ರೂ: 10,03,000/- (ರೂಪಾಯಿ ಹತ್ತು ಲಕ್ಷದ ಮೂರು ಸಾವಿರಗಳು ಮಾತ್ರ) ಗಳನ್ನು ರಾಷ್ಟ್ರೀಯ ಮಾನ್ಯತಾ ಮಂಡಳ, ನವದೆಹಲಿ ಇವರಿಂದ ಮಾನ್ಯತೆ ಪಡೆಯುವ ಸಲುವಾಗಿ ಮಾನ್ಯತಾ ಶುಲ್ಕವನ್ನು ಈ ಕೆಳಕಂಡ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ಖಜಾನೆ-2 ಮುಖಾಂತರ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

(ರೂ.ಗಳಲ್ಲಿ)

| ಕ್ರಮ ಸಂಖ್ಯೆ | ಸಂಸ್ಥೆಯ ಹೆಸರು | ಮಾನ್ಯತಾ ಶುಲ್ಕ | ಜಿಎಸ್‌ಟಿ (18%) | ಒಟ್ಟು ಮೊತ್ತ |
|---|---|---|---|---|
| 1 | ಸರ್ಕಾರಿ ಸಿ.ಪಿ.ಸಿ ಪಾಲಿಟೆಕ್ನಿಕ್, ಮೈಸೂರು | 5,00,000/- | 90,000/- | 5,90,000/- |

(ರೂ.ಗಳಲ್ಲಿ)

| ಕ್ರಮ ಸಂಖ್ಯೆ | ಸಂಸ್ಥೆಯ ಹೆಸರು | ಮಾನ್ಯತಾ ಶುಲ್ಕ | ಜಿಎಸ್‌ಟಿ (18%) | ಒಟ್ಟು ಮೊತ್ತ |
|---|---|---|---|---|
| 2 | ಸರ್ಕಾರಿ ಎಲ್.ವಿ ಪಾಲಿಟೆಕ್ನಿಕ್, ಹಾಸನ | 3,50,000/- | 63,000/- | 4,13,000/- |
| | ಒಟ್ಟು ಮೊತ್ತ | | | 10,03,000/- |

ಈಗ ಬಿಡುಗಡೆ ಮಾಡಿರುವ ಈ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸುವುದು. ರಾಷ್ಟ್ರೀಯ ಮಾನ್ಯತಾ ಮಂಡಳ, ನವದೆಹಲಿ ಇವರಿಂದ ಮಾನ್ಯತೆ ಪಡೆಯುವ ಸಲುವಾಗಿ ನಿಯಮಾನುಸಾರ ಕ್ರಮ ಜರುಗಿಸುವುದು.

ನಿರ್ದೇಶಕರು.
ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು.

**ಇವರಿಗೆ:**

1. ಪ್ರಿನ್ಸಿಪಾಲರು, ಸರ್ಕಾರಿ ಸಿ.ಪಿ.ಸಿ ಪಾಲಿಟೆಕ್ನಿಕ್, ಮೈಸೂರು
2. ಪ್ರಿನ್ಸಿಪಾಲರು, ಸರ್ಕಾರಿ ಎಲ್.ವಿ. ಪಾಲಿಟೆಕ್ನಿಕ್, ಹಾಸನ

**ಪ್ರತಿ:**

1. ಎನ್‌ಬಿಎ ಸಂಯೋಜಕರು, ನಿರ್ದೇಶನಾಲಯ, ಬೆಂಗಳೂರು